# ವಿಧಾನಪರಿಷತ್ ನೂತನ ಸದಸ್ಯರ ಪ್ರಮಾಣ ವಚನ

**ಬೆಂಗಳೂರು:** ಇತ್ತೀಚಿಗೆ ನಡೆದ ರಾಜ್ಯ ವಿಧಾನಪರಿಷತ್ ಚುನಾವಣೆಯಲ್ಲಿ ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾದ 25 ಸದಸ್ಯರಲ್ಲಿ 20 ಸದಸ್ಯರು ಗುರುವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಸರಳ ಸಮಾರಂಭದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ ಅವರ ಸಮ್ಮುಖದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ವಿವಿಧ ಕಾರಣಗಳಿಂದಾಗಿ 5 ಸದಸ್ಯರು ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಗೈರಾಗಿದ್ದರು. ಸಮಾರಂಭದಲ್ಲಿ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕ ಸಚಿವರು ಹಾಗೂ ಶಾಸಕರು ಉಪಸ್ಥಿತರಿದ್ದರು.

ನೂತನ ಸದಸ್ಯರುಗಳಾದ ಬಿ.ಜಿ.ಪಾಟೀಲ್, ಲಖನ್ ಜಾರಕಿಹೊಳಿ, ಗಣಪತಿ ಉಳ್ವೇಕರ್, ಸಲೀಂ ಅಹ್ಮದ್ ಹಾಗೂ ಎಂ.ಕೆ.ಪ್ರಾಣೇಶ್ ಅವರುಗಳು ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಸದಸ್ಯರಾದ ಪ್ರದೀಪ ಶೆಟ್ಟರ್, ಕೆ.ಎಸ್.ನವೀನ್, ಅರುಣ್ ಡಿ.ಎಸ್, ದಿನೇಶ್ ಗೂಳಿಗೌಡ, ಎಚ್.ಎಸ್. ಗೋಪಿನಾಥ್ ಹಾಗೂ ಡಾ.ಡಿ.ತಿಮ್ಮಯ್ಯ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು.

ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ವೀರಭದ್ರೇಶ್ವರ ಮತ್ತು ಬಸವೇಶ್ವರ, ಶರಣಗೌಡ ಪಾಟೀಲ ಬಯ್ಯಾಪುರ ಭಗವಂತ ಮತ್ತು ತಂದೆ-ತಾಯಿ, ಕೋಟ ಶ್ರೀನಿವಾಸ ಪೂಜಾರಿ ಅವರು ಭಗವಂತ ಮತ್ತು ವಿ.ಎಸ್.ಆಚಾರ್ಯ, ರಾಘವೇಂದ್ರ ರಾಜಣ್ಣ ಅವರು ಭಗವಂತ ಮತ್ತು ರೈತರು ಹಾಗೂ ಸಿ.ಎನ್. ಮಂಜೇಗೌಡ ಅವರು ತಾಯಿ ಚಾಮುಂಡೇಶ್ವರಿ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ನೂತನವಾಗಿ ಆಯ್ಕೆಯಾದ ಸದಸ್ಯರುಗಳ ಕುಟುಂಬದ ಸದಸ್ಯರು, ಅಭಿಮಾನಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕೋವಿಡ್ ನಿಯಮ ಉಲ್ಲಂಘನೆ

ರಾಜ್ಯದಲ್ಲಿ ಗುರುವಾರದಿಂದಲೇ ಕೋವಿಡ್ ನಿಯಂತ್ರಣಕ್ಕಾಗಿ ಕಠಿಣ ನಿಯಮಗಳನ್ನು ಜಾರಿಗೊಳಿಸಿದ್ದರೂ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ವಿಧಾನ ಪರಿಷತ್ ಸದಸ್ಯರ ಪ್ರಮಾಣ ವಚನ ಸಮಾರಂಭದಲ್ಲಿ ಎರಡು ಸಾವಿರಕ್ಕೂ ಅಧಿಕ ಜನರು ಪಾಲ್ಗೊಂಡಿದ್ದುದು ನಿಯಮಾವಳಿಯ ಸ್ಪಷ್ಟ ಉಲ್ಲಂಘನೆಯಾಗಿತ್ತು. ಮುಖ್ಯಮಂತ್ರಿಗಳ ಸಮ್ಮುಖದಲ್ಲೇ ನಡೆದ ಸಮಾರಂಭದಲ್ಲಿ ನಿಯಮಾವಳಿ ಪ್ರಕಾರ 200 ಮೀರಿ ಸಾವಿರ ಸಂಖ್ಯೆಯಲ್ಲಿ ಜನರು ಭಾಗಿಯಾಗಿದ್ದರು. ಸಾಮಾಜಿಕ ಅಂತರ ಪಾಲನೆಯಾಗದೇ ಅನೇಕರು ಮಾಸ್ಕ್ ಕೂಡ ಧರಿಸಿರಲಿಲ್ಲ. ಆದರೆ ಸರ್ಕಾರ ಯಾವುದೇ ಕ್ರಮಕೈಗೊಳ್ಳದೇ ಅಸಹಾಯಕವಾಗಿತ್ತು.

ಘಟನೆ ಬಗ್ಗೆ ಪ್ರತಿಕ್ರಿಯೆ ನೀಡಿದ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಸರ್ಕಾರ ತನಗೆ ಬೇಕಾದ ರೀತಿಯಲ್ಲಿ ಕೋವಿಡ್ ನಿಯಮ ಹೇರುತ್ತಿದೆ. ಇಂದಿನ ಸಭೆಯಲ್ಲಿ ಸ್ಪಷ್ಟ ನಿಯಮಾವಳಿ ಉಲ್ಲಂಘನೆ ಆಗಿದೆ ಎಂದರು.

# ಸಂಸತ್ತಿನ ನೂತನ ಸಂಕೀರ್ಣದಲ್ಲಿ ಅನುಭವ ಮಂಟಪ : ಹೊರಟ್ಟಿ

ಹುಬ್ಬಳ್ಳಿ: ನವದೆಹಲಿಯಲ್ಲಿ ನೂತನವಾಗಿ ನಿರ್ಮಿಸಲಾಗುತ್ತಿರುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಲೋಕಸಭಾ ನೂತನ ಕಟ್ಟಡ 'ಸೆಂಟ್ರಲ್ ವಿಸ್ತಾ' ಸಂಕೀರ್ಣದ ಕಟ್ಟಡವೊಂದಕ್ಕೆ 'ಅನುಭವ ಮಂಟಪ ಎಂದು ನಾಮಕರಣ ಮಾಡುವಂತೆ ವಿಧಾನ ಪರಿಷತ್ ಮಾನ್ಯ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರ ಮನವಿಗೆ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಸಕಾರಾತ್ಮಕ ಪ್ರತಿಕ್ರಿಯೆ ನೀಡಿದ್ದಾರೆ ಎಂದು ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.



12ನೇ ಶತಮಾನದಲ್ಲಿ ಅಲ್ಲಮ ಪ್ರಭು ಮತ್ತು ಬಸವಾದಿ ಶರಣರು ನಿರ್ಮಿಸಿದ ಅನುಭವ ಮಂಟಪ ಇಡೀ ವಿಶ್ವದ ಪ್ರಥಮ ಶಾಸನ ಸಭೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದು, ಪ್ರಜಾಪ್ರಭುತ್ವದ ಪರಿಕಲ್ಪನೆಗೆ ಮೂಲ ಅಡಿಪಾಯವಾಗಿದೆ. ಅನುಭವ ಮಂಟಪದ ಹೆಸರನ್ನು ಅತ್ಯಾಧುನಿಕ ತಂತ್ರಜ್ಞಾನ ಒಳಗೊಂಡು ನೂತನವಾಗಿ ನಿರ್ಮಿಸಲಾಗುತ್ತಿರುವ 'ಸೆಂಟ್ರಲ್ ವಿಸ್ತಾ' ಕಟ್ಟಡವೊಂದಕ್ಕೆ ನಾಮಕರಣ ಮಾಡುವ ಮೂಲಕ ಬಸವೇಶ್ವರರ ಹೆಸರನ್ನು ಅಜರಾಮರವಾಗಿಸಬೇಕು. ಇಂದಿನ ಯುವ ಪೀಳಿಗೆಗೆ ಪ್ರಜಾಪ್ರಭುತ್ವದ ಮೌಲ್ಯ ಹಾಗೂ ಜ್ಞಾನ ದಾಸೋಹಕ್ಕೆ ಪ್ರೇರಣೆ ನೀಡುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರಿಗೆ ಮನವಿ ಮಾಡಿದ್ದರು.

ಸಭಾಪತಿಗಳ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿರುವ ರಾಷ್ಟ್ರಪತಿಯವರ ಕಚೇರಿ, ನೂತನ ಲೋಕಸಭಾ ಸಂಕೀರ್ಣದ ಕಟ್ಟಡವೊಂದಕ್ಕೆ ಅನುಭವ ಮಂಟಪ ಹೆಸರಿಡುವ ಕುರಿತು ಸೂಕ್ತ ಗಮನಹರಿಸುವಂತೆ ಕೇಂದ್ರ ಸರ್ಕಾರದ ಸಂಸದೀಯ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿ, ಪತ್ರ ರವಾನಿಸಿದೆ. ರಾಷ್ಟ್ರಪತಿ ಕಚೇರಿಯ ಅಧೀನ ಕಾರ್ಯದರ್ಶಿ ಉಷಾ ಶಶಿಧರನ್ ಈ ಕುರಿತು ಸಭಾಪತಿ ಹೊರಟ್ಟಿ ಅವರ ಕಚೇರಿಗೆ ಪತ್ರ ಮುಖೇನ ಮಾಹಿತಿ ಸಲ್ಲಿಸಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಜೀವ ಕ್ಯಾಬಿನೆಟ್ ಸ್ಥಾನ

ಪಣಜಿ: ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಶಾಸಕ ಪ್ರತಾಪಸಿಂಹ ರಾಣೆ ಅವರಿಗೆ ಆಜೀವ ಕ್ಯಾಬಿನೆಟ್ ಸ್ಥಾನ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಪ್ರತಾಪಸಿಂಹ ರಾಣೆ ಕಳೆದ 50 ವರ್ಷಗಳ ಕಾಲ ಸತತವಾಗಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಶಾಸಕ, ಸಚಿವ, ಮುಖ್ಯಮಂತ್ರಿ, ಸ್ಪೀಕರ್, ವಿರೋಧ ಪಕ್ಷದ ನಾಯಕ, ಹೀಗೆ ನಾನಾ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಇತ್ತೀಚೆಗಷ್ಟೆ ರಾಜಕೀಯದಿಂದ ನಿವೃತ್ತರಾದ ಅವರು ತಮ್ಮ ಕ್ಷೇತ್ರದಿಂದ ಪ್ರಸಕ್ತ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಘೋಷಿಸಿದ್ದಾರೆ.

ಸಂಯುಕ್ತ ಕರ್ನಾಟಕ Fri, 07 January 2022
epaper.samyukthakarnataka.com/c/65447234